# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಪೂರ್ವ, ದೊಡ್ಡಬಳ್ಳಾಪುರ ಮತ್ತು ಚಿತ್ರದುರ್ಗ ತಾಲ್ಲೂಕು ಪಂಚಾಯತಿಗಳಿಗೆ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ವೆಚ್ಚಕ್ಕಾಗಿ ಹೆಚ್ಚುವರಿ ಒದಗಿಸಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆ ಇ 530 ಬಿ.ಆರ್.ಎಸ್. 2020 ದಿನಾಂಕ:12.3.2021
2. ಆರ್ಥಿಕ ಇಲಾಖೆ, ವೆಚ್ಚ 3 ಶಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 38 ವೆಚ್ಚ 3/2021 ದಿ:15.3.2021

**ಪ್ರಸ್ತಾವನೆ:**

2020–21ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ವೆಚ್ಚಕ್ಕಾಗಿ ಕೇಂದ್ರದಿಂದ ಸ್ವೀಕೃತವಾಗುವ ಅನುದಾನವನ್ನು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಸಂದಾಯ ಮಾಡುವ ಸಲುವಾಗಿ ಡಿ.ಬಿ.ಟಿ. ಮೂಲಕ ಕ್ರಮವಹಿಸಲಾಗುತ್ತಿದೆ. ಕೇಂದ್ರ ಸರ್ಕಾರ ಪ್ರಸ್ತಾವಿತ ಉದ್ದೇಶಕ್ಕಾಗಿ ಹೆಚ್ಚುವರಿಯಾಗಿ ಒದಗಿಸಿರುವ ಅನುದಾನಕ್ಕೆದುರಾಗಿ ರೂ.6230.00ಲಕ್ಷಗಳನ್ನು ಮೇಲೆ(1)ರ ಸರ್ಕಾರದ ಆದೇಶದ ಮೂಲಕ ಹೆಚ್ಚುವರಿಯಾಗಿ ತಾಲ್ಲೂಕು ಪಂಚಾಯತಿ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2225-00-101-0-68-117ರಡಿ ಲಿಂಕ್ ಡಾಕ್ಯುಮೆಂಟ್ ಲೆಕ್ಕ ಶೀರ್ಷಿಕೆ 2225-01-197-1-01-401, 402 ಮತ್ತು 403ರಡಿ ಅನುಕ್ರಮವಾಗಿ ರೂ.3349.56ಲಕ್ಷ, ರೂ.2000.44ಲಕ್ಷ ಮತ್ತು ರೂ.880.00ಲಕ್ಷಗಳನ್ನು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ಚಿತ್ರದುರ್ಗ ಜಿಲ್ಲೆಗಳ ವ್ಯಾಪ್ತಿಯ ಬೆಂಗಳೂರು ಪೂರ್ವ, ದೊಡ್ಡಬಳ್ಳಾಪುರ ಮತ್ತು ಚಿತ್ರದುರ್ಗ ತಾಲ್ಲೂಕು ಪಂಚಾಯತಿಗಳಿಗೆ ಒದಗಿಸಿದೆ.

ಒದಗಿಸಿರುವ ಹೆಚ್ಚುವರಿ ಅನುದಾನವನ್ನು ಪ್ರಸ್ತುತ ಎಲ್ಲಾ ವಿದ್ಯಾರ್ಥಿಗಳಿಗೆ ಸಂದಾಯಿಸಲು ವಿಳಂಬವಾಗುವುದನ್ನು ತಪ್ಪಿಸಲು ಹಾಗೂ ಪ್ರಸಕ್ತ ಸಾಲಿಗೆ ಮಾತ್ರ ಆಯ್ದ ತಾಲ್ಲೂಕು ಪಂಚಾಯತಿಗಳಿಗೆ ಬಿಡುಗಡೆಗೊಳಿಸಿ, ಬಿಡುಗಡೆಗೊಳಿಸಿದ ಈ ಅನುದಾನವನ್ನು ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಸ್ವೀಕರ್ತನ ರಶೀತಿ ( ) ಯ ಮೂಲಕ ಸೆಳೆದು ಸದರಿ ಅನುದಾನವನ್ನು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಹೆಸರಿನಲ್ಲಿ State Bank of India, Dr. B.R.Ambedkar Veedhi Branch, Bengaluru IFSC Code 040022ದಲ್ಲಿ ತೆರೆಯಲಾಗಿರುವ ಬ್ಯಾಂಕ್ ಖಾತೆ ಸಂಖ್ಯೆ: 38130085521ಕ್ಕೆ ಜಮೆಗೊಳಿಸುವಂತೆ ಹಾಗೂ ಈ ರೀತಿ ಜಮೆಗೊಳಿಸಿದ ಅನುದಾನವನ್ನು ಕ್ಲುಪ್ತ ವೇಳೆಯೊಳಗೆ ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಸಂದಾಯಿಸಲು ಕ್ರಮವಹಿಸಲು ಅನುಮತಿಯನ್ನು ಹಾಗೂ ಅನುದಾನವನ್ನು ಬಿಡುಗಡೆಗೊಳಿಸಲು ಮೇಳೆ(2)ರಲ್ಲಿ ಓದಲಾದ ಅನಧಿಕೃತ ಟಿಪ್ಪಣೆಯ ಮೂಲಕ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಒದಗಿಸಿರುವ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಸಂಬಂಧ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 177 ವೆಚ್ಚ 6/2021(ಇ) ದಿನಾಂಕ: 18ನೇ ಮಾರ್ಚ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದ ಕಾಲಂ 3ರ ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 4 ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ಕಾಲಂ 5ರ ಲೆಕ್ಕ ಶೀರ್ಷಿಕೆಯಡಿ ಒಟ್ಟು ರೂ.6230.00ಲಕ್ಷ (ರೂಪಾಯಿ ಆರು ಸಾವಿರದ ಎರಡು ನೂರ ಮೂವತ್ತು ಲಕ್ಷಗಳು ಮಾತ್ರ)ಗಳನ್ನು ಲೆಕ್ಕ ಬಿಡುಗಡೆಗೊಳಿಸಿದೆ

ಈ ರೀತಿ ಬಿಡುಗಡೆಗೊಳಿಸಿದ ಹೆಚ್ಚುವರಿ ಅನುದಾನವನ್ನು ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಕೂಡಲೇ ತಮ್ಮ ನಿಧಿ ಲೆಕ್ಕಕ್ಕೆ ಜಮೆ ಮಾಡಿಕೊಂಡು ಸಂಬಂಧಿಸಿದ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳಿಗೆ ಬಿಡುಗಡೆಗೊಳಿಸತಕ್ಕದ್ದು.

ಸಂಬಂಧಿಸಿದ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ಸದರಿ ಅನುದಾನವನ್ನು ಮೇಲೆ ಪ್ರಸ್ತಾವನೆಯಲ್ಲಿ ತಿಳಿಸಿರುವಂತೆ ಪೇಯೀಸ್ ರಶೀತಿಯ ಮೂಲಕ ಸೆಳೆದು ಸದರಿ ಮೊತ್ತವನ್ನು ಆರ್.ಟಿ.ಜಿ.ಎಸ್. ಮೂಲಕ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಹೆಸರಿನಲ್ಲಿ State Bank of India, Dr. B.R.Ambedkar Veedhi Branch, Bengaluru IFSC Code 040022ದಲ್ಲಿ ತೆರೆಯಲಾಗಿರುವ ಬ್ಯಾಂಕ್ ಖಾತೆ ಸಂಖ್ಯೆ: 38130085521ಕ್ಕೆ RTGS ಮೂಲಕ ಜಮೆಗೊಳಿಸತಕ್ಕದ್ದು.

ಯಾವುದೇ ಹಂತದಲ್ಲಿ ವಿಳಂಬವಾಗಿ ಅನುದಾನವನ್ನು ವ್ಯಪಗತವಾದಲ್ಲಿ ಇನ್ನೊಮ್ಮೆ ಅನುದಾನವನ್ನು ಬಿಡುಗಡೆಗೊಳಿಸಲಾಗುವುದಿಲ್ಲ ಹಾಗೂ ವ್ಯಪಗತವಾಗಲು ಕಾರಣರಾದ ಅಧಿಕಾರಿಗಳನ್ನೇ ಪೂರ್ಣ ಹೊಣೆಗಾರರನ್ನಾಗಿ ಪರಿಗಣಿಸಿ ಅಂತಹವರ ವಿರುದ್ಧ ನಿಯಮಾನುಸಾರ ಶಿಸ್ತಿನ ಕ್ರಮ ಜರುಗಿಸಲಾಗುವುದು.

| ಕ್ರ.ಸಂ. | ಜಿಲ್ಲೆ | ತಾಲ್ಲೂಕು ಪಂಚಾಯತಿ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | 2 | 3 | 4 | 5 |
| 1 | ಬೆಂಗಳೂರು ನಗರ(401) | ಬೆಂಗಳೂರು ಪೂರ್ವ (ಕೆ.ಆರ್.ಪುರ) | 2225-00-101-0-68-117 | 3349.56 |
| 2 | ಬೆಂಗಳೂರು ಗ್ರಾ. (402) | ದೊಡ್ಡಬಳ್ಳಾಪುರ | 2225-00-101-0-68-117 | 2000.44 |
| 3 | ಚಿತ್ರದುರ್ಗ (403) | ಚಿತ್ರದುರ್ಗ | 2225-00-101-0-68-117 | 880.00 |
| | **ಒಟ್ಟು** | | | **6230.00** |

(1) 1416086135
(2) 1416086169
(3) 1416086199
19.3.21

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. .ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ